**All India Radio: Bangalore**
**National Bulletin In Kannada**
**30.07.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**30.07.2026 07.35 a.m.**
**<><><><>**

ಮುಖ್ಯಾಂಶಗಳು

1. ಇದೇ ಭಾನುವಾರ 'ನಶಾ ಮುಕ್ತ ಯುವ ಫಾರ್ ವಿಕಸಿತ ಭಾರತ' ಅಭಿಯಾನಕ್ಕೆ ಚಾಲನೆ ನೀಡಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ
2. ಭಾರತ ಮೊಬೈಲ್ ಕಾಂಗ್ರೆಸ್ ೨೦೨೬ರ ೧೦ನೇ ಆವೃತ್ತಿಯ ಧ್ಯೇಯವಾಕ್ಯ ಬಿಡುಗಡೆ ಮಾಡಿದ ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ
3. ಕೇರಳಂನಲ್ಲಿ ಭಾರಿ ಮಳೆ ಸಾಧ್ಯತೆ ; ೩ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್
4. ಕಾಮನ್‌ವೆಲ್ತ್ ಕ್ರೀಡಾಕೂಟ : ಪದಕ ಪಟ್ಟಿಯಲ್ಲಿ ಐತಿಹಾಸಿಕ ಸಾಧನೆ ಮಾಡಿದ ಭಾರತ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದೇ ಭಾನುವಾರ 'ನಶಾ ಮುಕ್ತ ಯುವ ಫಾರ್ ವಿಕಸಿತ ಭಾರತ' ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ, ಉದ್ಘಾಟನಾ ಕಾರ್ಯಕ್ರಮದಲ್ಲಿ ೧ ಕೋಟಿಗೂ ಹೆಚ್ಚು ಮಂದಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ವೇಳೆ ಭಾಗವಹಿಸುವವರು ನಶಾ ಮುಕ್ತ ಪ್ರತಿಜ್ಞೆ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ. ಯುವಜನರು ಮಾದಕ ವಸ್ತುಗಳ ದುರ್ಬಳಕೆಯಿಂದ ದೂರವಿರುವಂತೆ ಉತ್ತೇಜಿಸುವ ಉದ್ದೇಶದಿಂದ ಈ ಅಭಿಯಾನವನ್ನು ೧೦೦ ವಾರಗಳ ಕಾಲ ದೇಶಾದ್ಯಂತ ಆಂದೋಲನವಾಗಿ ನಡೆಸಲಾಗುವುದು. ಪ್ರತಿ ಭಾನುವಾರ ಯುವಕರ ನೇತೃತ್ವದಲ್ಲಿ ಜಾಗೃತಿ ಅಭಿಯಾನ, ಸಮುದಾಯ ರ್‍ಯಾಲಿಗಳು ಹಾಗೂ ನಶಾ ಮುಕ್ತ ಪ್ರತಿಜ್ಞೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ವಿವರಿಸಿದ್ದಾರೆ. ಮೈ ಭಾರತ್ ಸ್ವಯಂಸೇವಕರು, ರಾಷ್ಟ್ರೀಯ ಸೇವಾ ಯೋಜನೆ, ಯುವಕ ಸಂಘಗಳು, ಶಾಲೆಗಳು, ಕಾಲೇಜುಗಳು, ವಿಶ್ವವಿದ್ಯಾಲಯಗಳು, ಸ್ವಯಂಸೇವಾ ಸಂಸ್ಥೆಗಳು, ಕೈಗಾರಿಕಾ ಸಂಘಟನೆಗಳು ಹಾಗೂ ಆಧ್ಯಾತ್ಮಿಕ ಸಂಸ್ಥೆಗಳು ಅಭಿಯಾನದಲ್ಲಿ ಪಾಲ್ಗೊಳ್ಳಲಿವೆ ಎಂದು ಸಚಿವ ಡಾ. ಮನ್ಸುಖ್ ಮಾಂಡವೀಯ ಮಾಹಿತಿ ನೀಡಿದ್ದಾರೆ.

<><><><>

ಕೇಂದ್ರ ಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು ನವದೆಹಲಿಯಲ್ಲಿ ಭಾರತ ಮೊಬೈಲ್ ಕಾಂಗ್ರೆಸ್-ಐಎಂಸಿ ೨೦೨೬ರ ೧೦ನೇ ಆವೃತ್ತಿಯ ಧ್ಯೇಯವಾಕ್ಯವನ್ನು ಬಿಡುಗಡೆ ಮಾಡಿದರು. ಏಷ್ಯಾದ ಅತಿದೊಡ್ಡ ಡಿಜಿಟಲ್ ತಂತ್ರಜ್ಞಾನ ವೇದಿಕೆಯಾಗಿರುವ ಐಎಂಸಿ ೨೦೨೬, ಅಕ್ಟೋಬರ್ ೭ರಿಂದ ೧೦ರವರೆಗೆ ನವದೆಹಲಿಯಲ್ಲಿ ನಡೆಯಲಿದೆ. ದೂರಸಂಪರ್ಕ ಇಲಾಖೆ ಮತ್ತು ಭಾರತೀಯ ಸೆಲ್ಯುಲರ್ ಆಪರೇಟರ್ಸ್ ಅಸೋಸಿಯೇಷನ್ ಜಂಟಿಯಾಗಿ ಆಯೋಜಿಸಿರುವ ಐಎಂಸಿ ೨೦೨೬ರಲ್ಲಿ ಜಾಗತಿಕ ತಂತ್ರಜ್ಞಾನ ನಾವೀನ್ಯಕಾರರು, ದೂರಸಂಪರ್ಕ ಸೇವಾದಾರರು, ನವೋದ್ಯಮಿಗಳು, ಸ್ಟಾರ್ಟ್‌ಅಪ್‌ಗಳು, ಹೂಡಿಕೆದಾರರು, ಸಂಶೋಧಕರು ಮತ್ತು ನೀತಿ ನಿರೂಪಕರು ಭಾಗವಹಿಸಲಿದ್ದಾರೆ. 'ಗಡಿಗಳಿಲ್ಲದೆ ವಿಸ್ತರಣೆ' ಎಂಬ ಧ್ಯೇಯವಾಕ್ಯವು ಭಾರತದ ದೂರಸಂಪರ್ಕ

ಆವಿಷ್ಕಾರಗಳು, ತಂತ್ರಜ್ಞಾನಗಳು ಮತ್ತು ಡಿಜಿಟಲ್ ಪರಿಹಾರಗಳನ್ನು ದೇಶದ ಗಡಿಗಳನ್ನು ಮೀರಿ ಜಾಗತಿಕ ಒಳಿತಿಗಾಗಿ ವಿಸ್ತರಿಸುವ ಮಹತ್ವಾಕಾಂಕ್ಷೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ. ದೇಶೀಯವಾಗಿ ಅಭಿವೃದ್ಧಿಪಡಿಸಿದ ಆವಿಷ್ಕಾರಗಳನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವುದು ಮತ್ತು ತಂತ್ರಜ್ಞಾನ ಮಾನದಂಡಗಳನ್ನು ರೂಪಿಸುವುದಕ್ಕೆ ಭಾರತದ ದೂರಸಂಪರ್ಕ ಕ್ಷೇತ್ರದ ಮುಂದಿನ ಹಂತದಲ್ಲಿ ಆದ್ಯತೆ ನೀಡಬೇಕು ಎಂದು ಹೇಳಿದ್ದಾರೆ. ಐಎಂಸಿ ೨೦೨೬ರಲ್ಲಿ ೫ಜಿ, ೬ಜಿ, ಕೃತಕ ಬುದ್ಧಿಮತ್ತೆ, ಇಂಟರ್‌ನೆಟ್ ಆಫ್ ಥಿಂಗ್ಸ್, ಉಪಗ್ರಹ ಸಂವಹನ, ಕ್ಲೌಡ್ ಮತ್ತು ಎಡ್ಜ್ ಕಂಪ್ಯೂಟಿಂಗ್, ಕ್ವಾಂಟಂ ತಂತ್ರಜ್ಞಾನ ಹಾಗೂ ಹಸಿರು ತಂತ್ರಜ್ಞಾನ ಸೇರಿದಂತೆ ಉದಯೋನ್ಮುಖ ತಂತ್ರಜ್ಞಾನಗಳನ್ನು ಪ್ರದರ್ಶಿಸಲಾಗುವುದು. ಸಮಾರಂಭದಲ್ಲಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಹಾಗೂ ಸಂವಹನ ಖಾತೆ ರಾಜ್ಯ ಸಚಿವ ಡಾ. ಚಂದ್ರಶೇಖರ ಪೆಮ್ಮಸಾನಿ, ಕಳೆದ ಒಂದು ದಶಕದಲ್ಲಿ ಭಾರತದ ದೂರಸಂಪರ್ಕ ಕ್ಷೇತ್ರ ಅಭೂತಪೂರ್ವ ಬೆಳವಣಿಗೆ ಕಂಡಿದೆ ದೇಶದ ದೂರಸಂಪರ್ಕ ಸಾಧನೆಗಳನ್ನು ಜಾಗತಿಕ ಮಟ್ಟದಲ್ಲಿ ಪ್ರದರ್ಶಿಸಲು ಭಾರತ ಮೊಬೈಲ್ ಕಾಂಗ್ರೆಸ್ ವೇದಿಕೆ ಒದಗಿಸುತ್ತಿದೆ ಎಂದು ಹೇಳಿದರು. ಸರ್ಕಾರ ಮತ್ತು ಉದ್ಯಮ ಕ್ಷೇತ್ರಗಳ ನಡುವಿನ ಸಹಯೋಗಕ್ಕೆ ಐಎಂಸಿ ವೇದಿಕೆಯಾಗಿದ್ದು, ಸ್ಟಾರ್ಟ್‌ಅಪ್‌ಗಳಿಗೆ ತಮ್ಮ ಆವಿಷ್ಕಾರಗಳನ್ನು ಪ್ರದರ್ಶಿಸಲು ಹಾಗೂ ಹೂಡಿಕೆದಾರರಿಗೆ ಭಾರತದ ಬೆಳೆಯುತ್ತಿರುವ ಡಿಜಿಟಲ್ ಪರಿಸರ ವ್ಯವಸ್ಥೆಗೆ ಬೆಂಬಲ ನೀಡಲು ಅವಕಾಶ ಕಲ್ಪಿಸುತ್ತದೆ ಎಂದು ಅವರು ತಿಳಿಸಿದರು.

<><><>

ಕೇರಳಂನ ೩ ಜಿಲ್ಲೆಗಳಿಗೆ ಪ್ರತ್ಯೇಕವಾಗಿ ಭಾರಿ ಮಳೆಯಾಗುವ ಸಾಧ್ಯತೆಯ ಹಿನ್ನೆಲೆಯಲ್ಲಿ ಇಂದು ಆರೆಂಜ್ ಅಲರ್ಟ್ ಘೋಷಿಸಲಾಗಿದೆ. “ಉತ್ತರ ಕೇರಳದ ಕೋಯಿಕ್ಕೋಡ್, ವಯನಾಡ್ ಮತ್ತು ಕಣ್ಣೂರು ಜಿಲ್ಲೆಗಳಲ್ಲಿ ಇಂದು ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಈ ಜಿಲ್ಲೆಗಳಲ್ಲಿ ಪ್ರತ್ಯೇಕವಾಗಿ ಅತಿ ಭಾರಿ ಮಳೆಯಾಗುವ ಸಾಧ್ಯತೆಯಿದೆ. ವಯನಾಡ್ ಜಿಲ್ಲೆಯಲ್ಲಿ ಇಂದು ಶಿಕ್ಷಣ ಸಂಸ್ಥೆಗಳಿಗೆ ರಜೆ ಘೋಷಿಸಲಾಗಿದೆ. ೮ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದ್ದು, ಪ್ರತ್ಯೇಕವಾಗಿ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಮಧ್ಯರಾತ್ರಿಯಿಂದ ಕೇರಳಂನ ಬಹುತೇಕ ಎಲ್ಲ ಜಿಲ್ಲೆಗಳಲ್ಲಿ ೫ರಿಂದ ೧೫ ಮಿಲಿಮೀಟರ್‌ವರೆಗೆ ಮಳೆಯಾಗಿದೆ. ನಾಳೆ ಮತ್ತು ಶನಿವಾರ ಕೇರಳದಾದ್ಯಂತ ಮಳೆಯ ತೀವ್ರತೆ ಮತ್ತಷ್ಟು ಹೆಚ್ಚಾಗುವ ನಿರೀಕ್ಷೆಯಿದೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ಪರೀಕ್ಷಾ ಅಕ್ರಮಗಳನ್ನು ತಡೆಯಲು ಕಠಿಣ ದಂಡನೆಗಳು ಮತ್ತು ತೀವ್ರಗತಿ ನ್ಯಾಯಾಲಯಗಳನ್ನು ಪ್ರಸ್ತಾಪಿಸುವ ಪ್ರಶ್ನೆಪತ್ರಿಕೆ ಸೋರಿಕೆ ವಿರೋಧಿ ಮಸೂದೆಯನ್ನು ಲೋಕಸಭೆಯು ಅಂಗೀಕರಿಸಿದೆ. ಈ ಮಸೂದೆಯು 'ಸಾರ್ವಜನಿಕ ಪರೀಕ್ಷೆಗಳ ಕಾಯ್ದೆ, ೨೦೨೪'ಕ್ಕೆ ತಿದ್ದುಪಡಿ ತರಲು ಬಯಸುತ್ತದೆ. 'ಸಾರ್ವಜನಿಕ ಪರೀಕ್ಷೆಗಳ ತಿದ್ದುಪಡಿ ಮಸೂದೆ, ೨೦೨೬' ಹಲವು ಪ್ರಮುಖ ನಿಬಂಧನೆಗಳನ್ನು ಒಳಗೊಂಡಿದ್ದು, ಇದರಲ್ಲಿ ಹತ್ತು ವರ್ಷಗಳವರೆಗೆ ಜೈಲು ಶಿಕ್ಷೆ, ಹತ್ತು ಕೋಟಿ ರೂಪಾಯಿಗಳವರೆಗೆ ದಂಡ ಮತ್ತು ಅಪರಾಧಿಗಳ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳುವಂತಹ ಕಠಿಣ ಶಿಕ್ಷೆಗಳು ಸೇರಿವೆ. ದಿನನಿತ್ಯದ ವಿಚಾರಣೆಗಾಗಿ ಪ್ರತಿಯೊಂದು ರಾಜ್ಯ ಸರ್ಕಾರ ಮತ್ತು ಕೇಂದ್ರಾಡಳಿತ ಪ್ರದೇಶದ ಆಡಳಿತವು ವಿಶೇಷ ತೀವ್ರಗತಿ ನ್ಯಾಯಾಲಯಗಳನ್ನು ಸ್ಥಾಪಿಸುವುದನ್ನು

ಈ ಶಾಸನವು ಕಡ್ಡಾಯಗೊಳಿಸುತ್ತದೆ. ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸಿದ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಇಲಾಖೆಯ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್, ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳಲ್ಲಿ ಕಾನೂನನ್ನು ಇನ್ನಷ್ಟು ಕಠಿಣಗೊಳಿಸಲು ಮತ್ತು ಶೀಘ್ರ ನ್ಯಾಯವನ್ನು ಖಚಿತಪಡಿಸಿಕೊಳ್ಳಲು ಈ ತಿದ್ದುಪಡಿಯನ್ನು ತರಲಾಗಿದೆ ಎಂದು ಹೇಳಿದರು. ಮಸೂದೆ ಅಂಗೀಕಾರಗೊಂಡ ನಂತರ, ಲೋಕಸಭೆ ಸದನವನ್ನು ಇಂದು ಬೆಳಿಗ್ಗೆ ೧೧ ಗಂಟೆಯವರೆಗೆ ಮುಂದೂಡಲಾಗಿದೆ.

<><><>

ರಾಜ್ಯಸಭೆಯು 'ರಾಷ್ಟ್ರೀಯ ಗೌರವಕ್ಕೆ ಅಪಮಾನ ತಡೆ ಮಸೂದೆ, ೨೦೨೮' ಅನ್ನು ಅಂಗೀಕರಿಸಿದೆ. ಈ ಮಸೂದೆಯು 'ರಾಷ್ಟ್ರೀಯ ಗೌರವಕ್ಕೆ ಅಪಮಾನ ತಡೆ ಕಾಯ್ದೆ, ೧೯೭೧' ಅನ್ನು ಮತ್ತಷ್ಟು ತಿದ್ದುಪಡಿ ಮಾಡಲಿದೆ. ಪ್ರಸ್ತಾವಿತ ಶಾಸನವು ರಾಷ್ಟ್ರಗೀತೆ 'ಜನ ಗಣ ಮನ'ಕ್ಕೆ ಇರುವಂತೆಯೇ 'ವಂದೇ ಮಾತರಂ'ಗೂ ಕಾನೂನುಬದ್ಧ ರಕ್ಷಣೆಯನ್ನು ನೀಡಲಿದೆ. ಈ ಅಪರಾಧಗಳು ಮೂರು ವರ್ಷಗಳವರೆಗೆ ಜೈಲು ಶಿಕ್ಷೆ, ದಂಡ ಅಥವಾ ಎರಡನ್ನೂ ವಿಧಿಸಬಹುದಾದ ಶಿಕ್ಷಾರ್ಹ ಅಪರಾಧಗಳಾಗಿವೆ. ಮಸೂದೆ ಅಂಗೀಕಾರಗೊಂಡ ನಂತರ ರಾಜ್ಯಸಭೆಯನ್ನು ಇಂದು ಬೆಳಗ್ಗೆ ೧೧ ಗಂಟೆಯವರೆಗೆ ಮುಂದೂಡಲಾಗಿದೆ.

<><><>

ನಾವೀನ್ಯತೆ, ಸಂಶೋಧನೆ ಮತ್ತು ಅಭಿವೃದ್ಧಿ, ಉದ್ಯಮಶೀಲತೆ ಹಾಗೂ ಜಾಗತಿಕವಾಗಿ ಸ್ಪರ್ಧಾತ್ಮಕ ಉತ್ಪಾದನೆಯು ಭಾರತದ ಮುಂದಿನ ಹಂತದ ಆರ್ಥಿಕ ಬೆಳವಣಿಗೆಯನ್ನು ನಿರ್ಧರಿಸಲಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ೨೨ನೇ ಜೆ.ಆರ್.ಡಿ. ಟಾಟಾ ಸ್ಮಾರಕ ಉಪನ್ಯಾಸ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತ ಶ್ರೇಷ್ಠತೆಯತ್ತ ಮುನ್ನಡೆಯಬೇಕು. 'ಮೇಡ್ ಇನ್ ಇಂಡಿಯಾ' ಉತ್ಪನ್ನಗಳು ಗುಣಮಟ್ಟ, ನಾವೀನ್ಯತೆ ಮತ್ತು ಸ್ಪರ್ಧಾತ್ಮಕತೆಯ ಮೂಲಕ ಜಾಗತಿಕ ಮನ್ನಣೆ ಗಳಿಸುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

<><><>

ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರು ಪಶ್ಚಿಮ ಬಂಗಾಳದ ಸಂಸದರು ಕ್ಷಯರೋಗ ನಿರ್ಮೂಲನೆಗಾಗಿ ಜನಾಂದೋಲನವನ್ನು ಮುನ್ನಡೆಸುವಂತೆ ಕರೆ ನೀಡಿದ್ದಾರೆ. ನವದೆಹಲಿಯ ವಿಸ್ತರಿತ ಸಂಸತ್ ಭವನದ ಆವರಣದಲ್ಲಿ ನಡೆದ ಮುಂಗಾರು ಅಧಿವೇಶನದ ಹಿನ್ನೆಲೆಯಲ್ಲಿ ಪಶ್ಚಿಮ ಬಂಗಾಳದ ಸಂಸದರೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><><>

ಕಾಮನ್‌ವೆಲ್ತ್ ಕ್ರೀಡಾಕೂಟದ ಪ್ಯಾರಾ ಅಥ್ಲೆಟಿಕ್ಸ್‌ನಲ್ಲಿ ಭಾರತ ಐತಿಹಾಸಿಕ ಸಾಧನೆ ಮಾಡಿದೆ. ಪುರುಷರ ೧೦೦ ಮೀಟರ್ ಟಿ-೪೭ ವಿಭಾಗದ ಫೈನಲ್‌ನಲ್ಲಿ ದಿಲೀಪ್ ಮಹಾದು ಗಾಯಕ್ ಚಿನ್ನದ ಪದಕ ಹಾಗೂ ಮೊಹಮ್ಮದ್ ಬಾಸಿಲ್ ಮೊರ್ಸಿಂಗನಕತ್ ಬೆಳ್ಳಿ ಪದಕ ಗೆದ್ದು ಭಾರತಕ್ಕೆ ಐತಿಹಾಸಿಕ ೧-೨ ಸ್ಥಾನ ತಂದುಕೊಟ್ಟಿದ್ದಾರೆ. ದಿಲೀಪ್ ಮಹಾದು ಗಾಯಕ್ ೧೦.೭೧ ಸೆಕೆಂಡ್‌ಗಳಲ್ಲಿ ಗುರಿ ತಲುಪಿ ಕ್ರೀಡಾಕೂಟದ ದಾಖಲೆ ಹಾಗೂ ಈ ಋತುವಿನ ಶ್ರೇಷ್ಠ ಸಾಧನೆಯೊಂದಿಗೆ ಚಿನ್ನ ಗೆದ್ದರು. ಬಾಸಿಲ್ ೧೦.೮೩ ಸೆಕೆಂಡ್‌ಗಳಲ್ಲಿ ಗುರಿ ತಲುಪಿ ಬೆಳ್ಳಿ ಪದಕ ಪಡೆದರು. ಇಂಗ್ಲೆಂಡ್‌ನ ಕೆವಿನ್ ಸ್ಯಾಂಟೋಸ್ ೧೦.೮೫ ಸೆಕೆಂಡ್‌ಗಳಲ್ಲಿ ಕಂಚಿನ ಪದಕ ಗೆದ್ದರು. ಪುರುಷರ ಲಾಂಗ್

ಜಂಪ್‌ನಲ್ಲಿ ಮುರಳಿ ಶ್ರೀಶಂಕರ್ ಬೆಳ್ಳಿ ಪದಕ ಗೆದ್ದಿದ್ದು, ದಿನದ ಆರಂಭದಲ್ಲೇ ಭಾರತಕ್ಕೆ ಮೊದಲ ಪದಕ ತಂದುಕೊಟ್ಟಿದ್ದರು. ಈ ಮೂಲಕ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಎರಡು ಪದಕ ಗೆದ್ದ ಮೊದಲ ಭಾರತೀಯ ಪುರುಷರ ಲಾಂಗ್ ಜಂಪ್ ಕ್ರೀಡಾಪಟು ಎಂಬ ಹೆಗ್ಗಳಿಕೆಗೆ ಶ್ರೀಶಂಕರ್ ಪಾತ್ರರಾಗಿದ್ದಾರೆ. ಗ್ಲಾಸ್ಗೋ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಭಾರತಕ್ಕೆ ಇದು ಮೂರನೇ ಚಿನ್ನದ ಪದಕವಾಗಿದೆ. ಮೀರಾಬಾಯಿ ಚಾನು ಮಹಿಳೆಯರ ೪೮ ಕೆಜಿ ವೇಟ್‌ಲಿಫ್ಟಿಂಗ್‌ನಲ್ಲಿ ಹಾಗೂ ಶರ್ಮಿಳಾ ಧನಕರ್ ಮಹಿಳೆಯರ ಶಾಟ್‌ಪುಟ್ ಎಫ್-೫೭ ಪ್ಯಾರಾ ಅಥ್ಲೆಟಿಕ್ಸ್ ವಿಭಾಗದಲ್ಲಿ ಚಿನ್ನ ಗೆದ್ದಿದ್ದಾರೆ. ಈ ಮೂರು ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ ಭಾರತ ೮ನೇ ಸ್ಥಾನಕ್ಕೇರಿದ್ದು, ಒಟ್ಟು ಪದಕಗಳ ಸಂಖ್ಯೆ ೧೫ಕ್ಕೆ ತಲುಪಿದೆ. ಭಾರತ ೩ ಚಿನ್ನ, ೯ ಬೆಳ್ಳಿ ಹಾಗೂ ೩ ಕಂಚಿನ ಪದಕಗಳನ್ನು ಗೆದ್ದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>